ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1538
ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್
ಉತ್ತರಿಸುವ ದಿನಾಂಕ : 24.09.2021.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ 2020-21ನೇ ಸಾಲಿನಲ್ಲಿ ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ ಪರಿಶಿಷ್ಟ ಜಾತಿ ವರ್ಗದವರಿಂದ ಕೊಳೆಬಾವಿ ಕೊರೆಯಲು ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು; (ವಿವರವನ್ನು ನೀಡುವುದು)	ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ 2020-21 ನೇ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಕೊಳವೆಬಾವಿ ಸೌಲಭ್ಯ ಕೋರಿ ಒಟ್ಟು 97 ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. ವಿವರ ಈ ಕೆಳಕಂಡಂತಿದೆ. ಕ್ರ.ಸಂ. / ಜಿಲ್ಲೆ / ಸಲ್ಲಿಕೆಯಾದ ಅರ್ಜಿಗಳು 01 / ಧಾರವಾಡ / 19 02 / ಗದಗ / 12 03 / ಹಾವೇರಿ / 66 ಒಟ್ಟು / 97
ಆ)	ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ 2020-21ನೇ ಸಾಲಿನಲ್ಲಿ ಕೊಳವೆಬಾವಿ ಕೊರೆಯಲು ಅನುಮೋದನೆಯಾದ ಅನುದಾನದ ಮೊತ್ತವೆಷ್ಟು;	2020-21 ನೇ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಕೊಳವೆಬಾವಿ ಕೊರೆಯಲು ಒಟ್ಟು ರೂ.220.33 ಲಕ್ಷಗಳ ಅನುದಾನ ಅನುಮೊದನೆಯಾಗಿದೆ. ವಿವರ ಈ ಕೆಳಕಂಡಂತಿದೆ. ಕ್ರ.ಸಂ. / ಜಿಲ್ಲೆ / ಅನುಮೋದನೆಯಾದ ಅನುದಾನ (ರೂ. ಲಕ್ಷಗಳಲ್ಲಿ) 01 / ಧಾರವಾಡ / 68.50 02 / ಗದಗ / 67.10 03 / ಹಾವೇರಿ / 84.73 ಒಟ್ಟು / 220.33
ಇ)	ಕೊಳವೆಬಾವಿ ಕೊರೆಯಲು ಸಲ್ಲಿಕೆಯಾಗಿರುವ ಅರ್ಜಿಗಳ ವಿಲೇವಾರಿಗೆ ನಿಗಮದಿಂದ ಯಾವ ರೀತಿಯಾದಂತಹ ಕ್ರಮ ಕೈಗೊಳ್ಳಲಾಗಿದೆ;	ಕೊಳವೆಬಾವಿ ಕೊರೆಯಲು ಸಲ್ಲಿಕೆಯಾಗುವ ಅರ್ಜಿಗಳನ್ನು ವಿಧಾನಸಭಾ ಕ್ಷೇತ್ರವಾರು ಪಟ್ಟಿ ಮಾಡಿ, ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಗೆ ಮಂಡಿಸಿ, ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಫಲಾಪೇಕ್ಷಿಗಳಿಗೆ ನಿಗಮದಿಂದ ನಿಯಮಾನುಸಾರ ಕೊಳವೆಬಾವಿ ಕೊರೆಯಲು ಕ್ರಮ ವಹಿಸಲಾಗುತ್ತಿದೆ.
ಈ)	ಈ ರೀತಿಯ ಅರ್ಜಿಗಳ ವಿಲೇವಾರಿಯನ್ನು ವಿಳಂಬ ಮಾಡಿ ಯೋಜನೆಯ ವಿಫಲತೆಗೆ ಕಾರಣವಾಗಿರುವ ಅಧಿಕಾರಿಗಳ ವಿರುದ್ಧ ಯಾವ ರೀತಿಯ ಕ್ರಮವನ್ನು ಕೈಗೊಳ್ಳಲಾಗಿದೆ?	ಅರ್ಜಿಗಳ ವಿಲೇವಾರಿಯನ್ನು ಅಧಿಕಾರಿಗಳಿಂದ ವಿಳಂಬ ಮಾಡಿ ಯೋಜನೆಯ ವಿಫಲತೆಗೆ ಕಾರಣವಾಗಿರುವುದು ಕಂಡುಬಂದಿರುವುದಿಲ್ಲ. ಕಂಡುಬಂದಲ್ಲಿ ನಿಗಮದಿಂದ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.

ಸಂಖ್ಯೆ: ಸಕಇ 455 ಎಸ್‌ಡಿಸಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.